ಕರ್ನಾಟಕ ಸರ್ಕಾರ
ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾವೇರಿ ಕಾರ್ಯಾಲಯ
ಜಿಲ್ಲಾ ಆಡಳಿತ ಭವನ, ಎ-ಬ್ಲಾಕ್, 3ನೇ ಮಹಡಿ, ದೇವಗಿರಿ ರಸ್ತೆ, ಹಾವೇರಿ 581 110.
ದೂರವಾಣಿ ::08375-249002/249005 E-mail ddwcd.haveri@gmail.com

ಸಂ.ಉನಿಹಾ/ಮಮಅಇ/ಅಂಕಾಕ/ಅಂಸ/2020-21 ದಿನಾಂಕ:11-08-2020

# ಅಧಿಸೂಚನೆ

ಹಾವೇರಿ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 07 ಶಿಶು ಅಭಿವೃದ್ಧಿಯೋಜನಾಧಿಕಾರಿಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 36ಅಂಗನವಾಡಿ ಕಾರ್ಯಕರ್ತೆ ಮತ್ತು 132ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿಯೋಜನಾ ಅಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 14-08-2020 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 14-09-2020 ಸಂಜೆ 5-30ಗಂಟೆ |
| ವೆಬ್ ಸೈಟ್ ವಿಳಾಸ | www.anganwadirecruit.kar.nic.in |

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಹಾವೇರಿ.

Pc2/awwonline/4

ಕರ್ನಾಟಕ ಸರ್ಕಾರ
**ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾವೇರಿ ಕಾರ್ಯಾಲಯ**
ಜಿಲ್ಲಾ ಆಡಳಿತ ಭವನ, ಎ-ಬ್ಲಾಕ್, 3ನೇ ಮಹಡಿ, ದೇವಗಿರಿ ರಸ್ತೆ, ಹಾವೇರಿ 581 110.
ದೂರವಾಣಿ ::08375-249002/249005 E-mail ddwcd.haveri@gmail.com

ಸಂ.ಉನಿಹಾ/ಮಮಅಇ/ಅಂಕಾಕ/ಅಂಸ/ಆಯ್ಕೆ/2020-21 ದಿನಾಂಕ: 11-08-2020

ವಿಷಯ:- ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ:- 1)ಸರ್ಕಾರಿ ಆದೇಶ ಸಂ.ಮಮಇ/303/ಐಸಿಡಿ/2017/ ಬೆಂಗಳೂರು/ ದಿನಾಂಕ:23-09-2017.
2)ಸೇರ್ಪಡೆ ಆದೇಶ ಸಂ.ಮಮಇ/27/ಐಸಿಡಿ/2017/ದಿ:01-12-17.
3)ಸರ್ಕಾರದ ಸುತ್ತೋಲೆ ಸಂ.ಮಮಇ/ಐಸಿಡಿ/ಎಎನ್‌ಜಿ-1/ 2018-19/ ದಿನಾಂಕ:05-01-2019.
4)ಮಾನ್ಯ ಜಿಲ್ಲಾಧಿಕಾರಿಗಳು, ಹಾವೇರಿ ಇವರ ಅನುಮೋದನೆ ಕಂಡಿಕೆ ಸಂ.41/ದಿನಾಂಕ:05-08-2020.

-***-

ಹಾವೇರಿ ಜಿಲ್ಲೆಯ 07 ಶಿಶು ಅಭಿವೃದ್ಧಿಯೋಜನೆ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ/ನಗರ ಪ್ರದೇಶಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವ ಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ ಅದೇ ಕಂದಾಯ ವಾರ್ಡಿನ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ. ತೇರ್ಗಡೆ ಆಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆ ಹೊಂದಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲ ದಾಖಲೆಗಳೊಂದಿಗೆ ಸಂಬಂಧಿತರು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:09-09-2020ರ ಅಪರಾಹ್ನ 5-30 ಗಂಟೆಯೊಳಗೆ ಆನಲೈನನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಿದೆ.

<u>-::ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು::-</u>

1)ಮಾಹಿತಿಯನ್ನು ಭರ್ತಿ ಮಾಡಿದ ಅರ್ಜಿ (ಆನಲೈನ್)
2)ಜನನ ಪ್ರಮಾಣ ಪತ್ರ/ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ.
3)ಕಡ್ಡಾಯವಾಗಿ ತಹಶೀಲದಾರರು/ ಉಪತಹಶೀಲದಾರರಿಂದ ಪಡೆದ ಒಂದು ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ ಲಗತ್ತಿಸುವುದು, ಬೇರೆ ರಹವಾಸಿ ಪ್ರಮಾಣ ಪತ್ರ ಲಗತ್ತಿಸಿದಲ್ಲಿ ಪರಿಗಣಿಸಲಾಗುವುದಿಲ್ಲ.
4)ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ 10ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು 10ನೇ ತರಗತಿಯ ಅಂಕಪಟ್ಟಿಯನ್ನು ಲಗತ್ತಿಸುವುದು) ಎಸ್.ಎಸ್.ಎಲ್.ಸಿ. ಅಂಕಗಳ ಪಡೆದ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲಾಗುವುದು.
5)ಅಂಗನವಾಡಿ ಸಹಾಯಕಿ ಹುದ್ದೆಗೆ ಆಯ್ಕೆ ಬಯಸುವ ಅಭ್ಯರ್ಥಿಗಳು 4 ರಿಂದ 9ನೇ ಇಯತ್ತೆಯವರೆಗಿನ ಅಂಕ ಪಟ್ಟಿಗಳನ್ನು ಮಾತ್ರವೇ ಸಲ್ಲಿಸಬೇಕು. ಎಸ್‌ಎಸ್‌ಎಲ್‌ಸಿ ಮತ್ತು ಹೆಚ್ಚಿನ ವಿದ್ಯಾರ್ಹತೆಯನ್ನು ಪರಿಗಣಿಸುವುದಿಲ್ಲ.
6)ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ. (ತಹಶೀದಾರರು ನೀಡಿದ್ದು)
7)ವಿಧವಾ ಅಭ್ಯರ್ಥಿಗಳು ಕಡ್ಡಾಯವಾಗಿ ಪತಿಯ ಮರಣ ಪ್ರಮಾಣ ಪತ್ರ ಲಗತ್ತಿಸುವುದು. (ಯಾವುದೇ ಕಾರಣಕ್ಕೂ ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
8)ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

9)ಅಂಗವಿಕಲತೆ ಪ್ರಮಾಣ ಪತ್ರವನ್ನು ಪರಿಗಣಿಸಲಾಗುವುದು. (ದೈಹಿಕ ಅಂಗವಿಕಲತೆ ಶೇ.60ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) (ಅಂಗವಿಕಲರ ಮಾಶಾಸನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)

10)ಅಂಗನವಾಡಿ ಕಾರ್ಯಕರ್ತೆ ನೇಮಕಾತಿಯಲ್ಲಿ ವಿಕಲಚೇತನರಿಗೆ 10ವರ್ಷ ವಯೋಮಿತಿ ಸಡಿಲಿಕೆಯನ್ನು ನೀಡಿದೆ.

11)ವಿಚ್ಛೇಧನ ಹೊಂದಿರುವ ಮಹಿಳೆಯರು ನ್ಯಾಯಾಲಯದಿಂದ ಪಡೆದ ವಿಚ್ಛೇಧನ ಪ್ರಮಾಣ ಪತ್ರವನ್ನು ಲಗತ್ತಿಸುವುದು.

12)ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸುವುದು.

13) ಪರಿತ್ಯಕ್ತೆ ಮಹಿಳೆಯರು ಗ್ರಾಮ ಪಂಚಾಯತನಿಂದ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸುವುದು.

14)ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.

15)ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲದಾರರಿಂದ ಪಡೆದ ಪ್ರಮಾಣ ಪತ್ರ.

16)ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳಾಗಿದ್ದಲ್ಲಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

17)ನಗರ ಪ್ರದೇಶದಲ್ಲಿನ ಅಂಗನವಾಡಿಗಳಿಗೆ ಅರ್ಜಿ ಸಲ್ಲಿಸಿ ಬಯಸುವವರು ಅದೇ ಕಂದಾಯ ವಾರ್ಡಿನ ನಿವಾಸಿಗಳಾಗಿರಬೇಕು, ಬೇರೆ ವಾರ್ಡಿನ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ. (ತಹಶೀಲದಾರರಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸುವುದು)

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಹಾವೇರಿ.

Pc2/awwonline/4

ಕರ್ನಾಟಕ ಸರ್ಕಾರ
ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾವೇರಿ ಕಾರ್ಯಾಲಯ
ಜಿಲ್ಲಾ ಆಡಳಿತ ಭವನ, ಎ-ಬ್ಲಾಕ್, 3ನೇ ಮಹಡಿ, ದೇವಗಿರಿ ರಸ್ತೆ, ಹಾವೇರಿ 581 110.
ದೂರವಾಣಿ ::08375-249002/249005 E-mail ddwcd.haveri@gmail.com

# Calendar of Events

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.

| | |
|---|---|
| ವೆಬ್ ಸೈಟ್ ವಿಳಾಸ | www.anganwadirecruit.kar.nic.in |

| ದಿನಾಂಕ | ದಿನ | ವಿವರ | ಶರಾ |
|---|---|---|---|
| 14-08-2020 | -- | ಆನಲೈನನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | |
| 14-09-2020 | 30 ದಿನ | ಆನಲೈನನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | |
| 15-09-2020<br>16-09-2020 | 02 ದಿನ | ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿಯೋಜನಾಧಿಕಾರಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಎನ್.ಐ.ಸಿ.ಯಲ್ಲಿ ಪರಿಶೀಲನೆ | |
| 18-09-2020<br>19-09-2020 | 02 ದಿನ | ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು | |
| 21-09-2020<br>29-09-2020 | 08 ದಿನ | ಅಭ್ಯರ್ಥಿಗಳಿಂದ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ | |
| 01-10-2020<br>03-10-2020 | 03 ದಿನ | ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ | |
| 05-10-2020<br>07-10-2020 | 03 ದಿನ | ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು. | |

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಹಾವೇರಿ.